ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ಆದೇಶ ಸಂಖ್ಯೆ: ನಅಇ 304 ಸಿಎಸ್‌ಎಸ್ 2020, 28-04-2021ರನ್ವಯ 15ನೇ ಹಣಕಾಸು ಆಯೋಗದ ಅನುದಾನದಡಿಯಲ್ಲಿ ಅನುಮೋದನೆಯಾಗಿರುವ ಬಿಬಿಎಂಪಿ ವ್ಯಾಪ್ತಿಯ ಬ್ಯಾಟರಾಯನಪುರ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕೈಗೊಳ್ಳಲು ಉದ್ದೇಶಿಸಿರುವ "Landscape development of parks, medians in Byatarayanapura Constituency Package 2 (Indent No. 52822)" (ಕ್ರಮ ಸಂಖ್ಯೆ: 4ರ ಕಾಮಗಾರಿ ಕ್ರಮ ಸಂಖ್ಯೆ: 47, 48 ಮತ್ತು 49) ಪ್ಯಾಕೇಜಿನ ಕಾಮಗಾರಿಯ ಅಂದಾಜು ಮೊತ್ತ ರೂ.1.10 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಟೆಂಡರ್‌ಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ನಅಇ 304 ಸಿಎಸ್‌ಎಸ್ 2020, ದಿನಾಂಕ: 28-04-2021.
2. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಉ.ನಿ.(ತೋ)/ಪಿ.ಆರ್/373/2022-23, ದಿನಾಂಕ: 08-11-2022.
3. ದಿನಾಂಕ: 01-12-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

* * * * *

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 28-04-2021ರ ಆದೇಶದಲ್ಲಿ, ಬಿಬಿಎಂಪಿ ವ್ಯಾಪ್ತಿಯಲ್ಲಿ 15ನೇ ಹಣಕಾಸು ಆಯೋಗದಡಿಯಲ್ಲಿ 2020-21ನೇ ಸಾಲಿಗೆ ವಾಯುಗುಣಮಟ್ಟ ಸುಧಾರಣೆಗಾಗಿ ನಿಗಧಿಯಾಗಿರುವ ಒಟ್ಟು ರೂ.279.00 ಕೋಟಿಗಳ ಅನುದಾನಕ್ಕೆ ಬಿಬಿಎಂಪಿಯು ಸಲ್ಲಿಸಿರುವ ಒಟ್ಟು 90 ವಿವಿಧ ಚಟುವಟಿಕೆಗಳನ್ನೊಳಗೊಂಡ ಸೂಕ್ಷ್ಮಮಟ್ಟದ ಕ್ರಿಯಾ ಯೋಜನೆಗೆ ಸರ್ಕಾರದ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ. ಸದರಿ ಆದೇಶದ ಕ್ರಮ ಸಂಖ್ಯೆ: 4ರ ಕಾಮಗಾರಿ ಕ್ರಮ ಸಂಖ್ಯೆ: 47, 48 ಮತ್ತು 49ರ 03 ಕಾಮಗಾರಿಗಳಿಗೆ ರೂ.1.10 ಕೋಟಿಗಳ ಅನುದಾನ ನಿಗಧಿಪಡಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 08-11-2022ರ ಪತ್ರದಲ್ಲಿ, ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು 15ನೇ ಹಣಕಾಸು ಯೋಜನೆಯ ಕ್ರಿಯಾಯೋಜನೆಗೆ ಅನುಮೋದನೆ ದೊರೆತಿರುವಂತೆ ಕ್ರಮ ಸಂಖ್ಯೆ: 4 ರ "Greening of Urban spaces and Plantation Drive-7% (Rs. 19.53 Crores) The Works shall include the O & M component where in the treated sewage water shall be used to maintain them for a period of One Year" ರ ಕ್ರಮ ಸಂಖ್ಯೆ: 14 ರಿಂದ 54 ರವರೆಗೆ ಒಟ್ಟು 41 ಉಪ ಕಾಮಗಾರಿಗಳು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಾದ್ಯಂತ ಇರುವುದರಿಂದ ಹಾಗೂ ಹಸಿರೀಕರಣವನ್ನು ನಿರಂತರವಾಗಿ ನಿರ್ವಹಣೆ ಮತ್ತು ಮೇಲ್ವಿಚಾರಣೆ ಮಾಡುವುದು ಅವಶ್ಯಕತೆ ಇರುವುದರಿಂದ, ಕಾಮಗಾರಿ ಅನುಷ್ಠಾನ ಮತ್ತು ಸಮರ್ಪಕ ನಿರ್ವಹಣೆ ಕೈಗೊಳ್ಳಲು ಅನುಕೂಲವಾಗುವಂತೆ ವಿಧಾನ ಸಭಾ ಕ್ಷೇತ್ರವಾರು 23 ಪ್ಯಾಕೇಜ್ ಟೆಂಡರ್ ಮಾಡಲಾಗಿರುತ್ತದೆ. ಒಟ್ಟು ರೂ.19.53 ಕೋಟಿಗಳ ಅನುದಾನ ಲಭ್ಯವಿರುತ್ತದೆ.

. . .2/-

Scanned with CamScanner

ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಇ-ಪ್ರೊಕ್ಯೂರ್‌ಮೆಂಟ್ ಮೂಲಕ "Landscape development of parks, medians in Byatarayanapura Constitunecy package 2" ಟೆಂಡರ್ ಆಹ್ವಾನಿಸಿದ್ದು, ಸರ್ಕಾರದ ಆದೇಶ ಸಂಖ್ಯೆ: ನಅಇ 304 ಸಿಎಸ್‌ಎಸ್ 2020, ದಿನಾಂಕ: 28-04-2021ರ ಕ್ರಮ ಸಂಖ್ಯೆ: 4 ರಲ್ಲಿ ಕಾಮಗಾರಿ ಸಂಖ್ಯೆ: 47, 48 ಮತ್ತು 49 ರಲ್ಲಿ ಒಟ್ಟು 3 ಕಾಮಗಾರಿಗಳಿಗೆ ಬ್ಯಾಟರಾಯನಪುರ ವಿಧಾನ ಸಭಾವಾರು ಒಂದೇ ಪ್ಯಾಕೇಜ್ ಅನ್ನು ಮಾಡಿ ಟೆಂಡರ್ ಆಹ್ವಾನಿಸಿದ್ದು, ಸದರಿ ಕಾಮಗಾರಿಗೆ ದಿನಾಂಕ: 11-08-2022 ರಂದು ದ್ವಿ-ಲಕೋಟೆ ಪದ್ಧತಿಯಲ್ಲಿ E-Procurement ಟೆಂಡರ್ ಮೂಲಕ ರೂ.110.00 ಲಕ್ಷಗಳಿಗೆ ಕಾಮಗಾರಿ ಟೆಂಡರ್ ಪ್ರಕಟಣೆ ಸಂಖ್ಯೆ: BBMP/SADH(YNK)/TENDER/09/2022-23, Date: 11-08-2022 ರಂತೆ ಟೆಂಡರ್‌ಗಿಟ್ಟ ಮೊತ್ತ ರೂ.93,20,648.34 ಗಳಿಗೆ ಟೆಂಡರ್ ಆಹ್ವಾನಿಸಲಾಗಿದ್ದು, ಸದರಿ ಟೆಂಡರ್ ಪ್ರಕಟಣೆಯನ್ನು ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ ದಿನಾಂಕ: 12-08-2022 ರಂದು ಪ್ರಚುರಪಡಿಸಲಾಗಿರುತ್ತದೆ.

ದ್ವಿ-ಲಕೋಟೆ ತಾಂತ್ರಿಕ ಟೆಂಡರ್‌ನಲ್ಲಿ ಇಬ್ಬರು ಗುತ್ತಿಗೆದಾರರು ಭಾಗವಹಿಸಿದ್ದು, ಗುತ್ತಿಗೆದಾರರು ಸಲ್ಲಿಸಿರುವ ದಾಖಲೆಗಳನ್ವಯ ದಿನಾಂಕ: 26-09-2022 ರಂದು ತಾಂತ್ರಿಕ ಮೌಲ್ಯಮಾಪನ ಸಮಿತಿ ಸಭೆಯ ನಡವಳಿಯ ತೀರ್ಮಾನದಂತೆ, ತಾಂತ್ರಿಕವಾಗಿ ಅರ್ಹಗೊಂಡ ಇಬ್ಬರು ಬಿಡ್‌ದಾರರ ಆರ್ಥಿಕ ಬಿಡ್‌ನ್ನು ದಿನಾಂಕ: 08-10-2022 ರಂದು ತೆರೆಯಲಾಗಿದ್ದು, ವಿವರಗಳು ಈ ಕೆಳಕಂಡಂತಿರುತ್ತದೆ ಎಂದು ಮುಖ್ಯ ಆಯುಕ್ತರು, ಬಿಬಿಎಂಪಿ ರವರು ತಿಳಿಸಿರುತ್ತಾರೆ.

ಕ್ರ ಸಂ	ಗುತ್ತಿಗೆದಾರರ ಹೆಸರು	ಟೆಂಡರ್‌ಗಿಟ್ಟ ಮೊತ್ತ (ರೂ.ಗಳಲ್ಲಿ) (ಜಿ.ಎಸ್.ಟಿ ಹೊರತುಪಡಿಸಿ)	ಗುತ್ತಿಗೆದಾರರು ನಮೂದಿಸಿರುವ ಮೊತ್ತ (ರೂ.ಗಳಲ್ಲಿ)	Issue Rates as on 07/07/2022 ಹೋಲಿಸಿದಾಗ ಟೆಂಡರ್ ಮೊತ್ತ (ರೂ.ಗಳಲ್ಲಿ)	ಮಂಜೂರಾದ ದರಗಳಿಗೆ ಹೋಲಿಸಿದಾಗ ಶೇಕಡವಾರು	Issue Rates as on 07/07/2022 ಹೋಲಿಸಿದಾಗ ಶೇಕಡವಾರು
1	Sri. M. Shekar	93,20,648.34	92,27,085.35	91,46,502.34	-1.00%	0.88%
2	Sri. B. Manjunath		95,16,440.70		2.10%	4.04%

L1 ಬಿಡ್‌ದಾರರಾದ SRI. M. Shekar ರವರು ರೂ.92,27,085.35/- ಗಳನ್ನು (ಜಿ.ಎಸ್.ಟಿ. ಹೊರತುಪಡಿಸಿ) ನಮೂದಿಸಿದ್ದು, ಮಂಜೂರಾದ ದರಗಳಿಗೆ ಹಾಗೂ ಚಾಲ್ತಿ ದರಗಳಿಗೆ (2021-22ನೇ ಸಾಲಿನ Issue rates as on 07-07-2022) ಹೋಲಿಸಿದಾಗ ಶೇ. 0.88% ಹೆಚ್ಚಿಗೆ ಇರುತ್ತದೆ. ಅದರಂತೆ ಸದರಿ ಟೆಂಡರ್ ಬಗ್ಗೆ ತೀರ್ಮಾನ ಕೈಗೊಳ್ಳಲು ಸರ್ಕಾರದ ಮಟ್ಟದಲ್ಲಿ ರಚಿತವಾಗಿರುವ ಅಧಿಕಾರಯುಕ್ತ ಸಮಿತಿಯ ಮುಂದೆ ಮಂಡಿಸುವುದು ಸೂಕ್ತವೆಂದು ಸರ್ವಾನುಮತದಿಂದ ತೀರ್ಮಾನಿಸಲಾಯಿತು.

15ನೇ ಹಣಕಾಸು ಆಯೋಗದಡಿ ಮೇಲ್ಕಂಡ ಕಾಮಗಾರಿಯ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ಮತ್ತು ಕನಿಷ್ಟ ದರದ ಸಂಧಾನಿತ ಟೆಂಡರ್ ಅನುಮೊದನೆಗಾಗಿ ಸರ್ಕಾರದಿಂದ ರಚಿತವಾಗಿರುವ ಅಧಿಕಾರಯುಕ್ತ ಸಮಿತಿಯ ಮುಂದೆ ಪ್ರಸ್ತಾವನೆ ಮಂಡಿಸುವಂತೆ ಬಿಬಿಎಂಪಿ ಮುಖ್ಯ ಆಯುಕ್ತರು ಕೋರಿರುತ್ತಾರೆ.

. . .3/-

Scanned with CamScanner

ಈ ಹಿನ್ನೆಲೆಯಲ್ಲಿ, ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 01-12-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ಮುಂದೆ ಬಿ.ಬಿ.ಎಂ.ಪಿ. ಮುಖ್ಯ ಆಯುಕ್ತರ ದಿನಾಂಕ: 08-11-2022ರ ಪ್ರಸ್ತಾವನೆಯನ್ನು ಮಂಡಿಸಲಾಗಿದ್ದು, ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ, ವಿಷಯವನ್ನು ಚರ್ಚಿಸಿ ಈ ಕೆಳಕಂಡಂತೆ ನಿರ್ಣಯಿಸಲಾಗಿದೆ.

> "ವಿವರವಾದ ಚರ್ಚೆಯ ನಂತರ, "Landscape development of parks, medians in Byatarayanapura Constituency package 2" ಯೋಜನೆಯ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, Sri.M.Shekar ರವರ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.93,20,648.34 ಗಳಿಗೆ ಹೋಲಿಸಿದಾಗ ಶೇಕಡ (-)1.00%% ರಷ್ಟು ಕಡಿಮೆ ಮತ್ತು ದಿನಾಂಕ: 07.07.2022 ರಿಂದ ಜಾರಿಯಲ್ಲಿರುವ 2021-22ನೇ ಸಾಲಿನ ಪರಿಷ್ಕೃತ ದರಗಳಿಗೆ ಹೋಲಿಸಿದಾಗ ಶೇಕಡ (+)0.88% ರಷ್ಟು ಹೆಚ್ಚು ಇರುವ ಅಂದರೆ, ರೂ.92,27,085.00 ಗಳ ಮೊತ್ತಕ್ಕೆ ಅನುಮೋದಿಸಲು ಮತ್ತು ರೂ.10 ಕೋಟಿಗಿಂತ ಕಡಿಮೆ ಇರುವ ಮೊತ್ತದ ಪ್ಯಾಕೇಜ್ ರೂಪಿಸಿ ಟೆಂಡರ್ ಕರೆದಿರುವ ಕ್ರಮವನ್ನು ಸಂಬಂಧಪಟ್ಟ ಮುಖ್ಯ ಅಭಿಯಂತರರು / ಉಪ ನಿರ್ದೇಶಕರು(ತೋಟಗಾರಿಕೆ) ರವರು ನೀಡಿದ ವಿವರಣೆಯನ್ನು ಪರಿಗಣಿಸಿ ಸ್ಥಿರೀಕರಣಕ್ಕಾಗಿ, ಮಾನ್ಯ ಮುಖ್ಯಮಂತ್ರಿಗಳ ಅನುಮೋದನೆಗೆ ಸಲ್ಲಿಸಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು."

ದಿನಾಂಕ: 01-12-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ನಅಇ 876 ಎಂಎನ್‌ವೈ 2022 (ಇ),
ಬೆಂಗಳೂರು, ದಿನಾಂಕ: 21-01-2023.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 304 ಸಿಎಸ್‌ಎಸ್ 2020, ದಿನಾಂಕ: 28-04-2021 ರಲ್ಲಿ, ಬಿಬಿಎಂಪಿ ವ್ಯಾಪ್ತಿಯಲ್ಲಿ 15ನೇ ಹಣಕಾಸು ಆಯೋಗದಡಿಯಲ್ಲಿ 2020-21ನೇ ಸಾಲಿಗೆ ವಾಯುಗುಣಮಟ್ಟ ಸುಧಾರಣೆಗಾಗಿ ನಿಗಧಿಯಾಗಿರುವ ಒಟ್ಟು ರೂ.279.00 ಕೋಟಿಗಳ ಅನುದಾನಕ್ಕೆ ಬಿಬಿಎಂಪಿಯು ಸಲ್ಲಿಸಿರುವ ಒಟ್ಟು 90 ವಿವಿಧ ಚಟುವಟಿಕೆಗಳನ್ನೊಳಗೊಂಡ ಸೂಕ್ಷ್ಮಮಟ್ಟದ ಕ್ರಿಯಾ ಯೋಜನೆಗೆ ಸರ್ಕಾರದ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ. ಸದರಿ ಆದೇಶದ ಕ್ರಮ ಸಂಖ್ಯೆ: 4ರ ಕಾಮಗಾರಿ ಕ್ರಮ ಸಂಖ್ಯೆ: 47, 48 ಮತ್ತು 49ರ 03 ಕಾಮಗಾರಿಗಳನ್ನು ಒಗ್ಗೂಡಿಸಿ ಮಾಡಲಾಗಿರುವ "Landscape development of parks, medians in Byatarayanapura Constituency Package 2 (Indent No.52822)" ಪ್ಯಾಕೇಜಿನ ರೂ.1.10 ಕೋಟಿಗಳ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, ದಿನಾಂಕ: 01-12-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ, Sri.M.Shekar ರವರ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.93,20,648.34 ಗಳಿಗೆ ಹೋಲಿಸಿದಾಗ ಶೇಕಡ (-)1.00%% ರಷ್ಟು ಕಡಿಮೆ ಮತ್ತು ದಿನಾಂಕ: 07-07-2022 ರಿಂದ ಜಾರಿಯಲ್ಲಿರುವ 2021-22ನೇ ಸಾಲಿನ ಪರಿಷ್ಕೃತ ದರಗಳಿಗೆ ಹೋಲಿಸಿದಾಗ ಶೇಕಡ (+)0.88% ರಷ್ಟು ಹೆಚ್ಚು ಇರುವ ಅಂದರೆ, ರೂ.92,27,085.00 (ತೊಂಭತ್ತೆರಡು ಲಕ್ಷದ ಇಪ್ಪತ್ತೇಳು ಸಾವಿರದ ಎಂಭತ್ತೈದು ರೂಪಾಯಿಗಳು ಮಾತ್ರ) ಗಳಿಗೆ ಮಿತಿಗೊಳಿಸಿ ಟೆಂಡರ್‌ಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮೋದನೆಯನ್ನು ನೀಡಿದೆ.

ಷರತ್ತುಗಳು:

1. ಕಾಮಗಾರಿಗಳಿಗೆ ಅನುಮೋದನೆ ನೀಡಿರುವ ಟೆಂಡರ್ ಮೊತ್ತಕ್ಕೆ ಬಿಡ್‌ದಾರರು ಒಪ್ಪದ ಪಕ್ಷದಲ್ಲಿ ಮರು ಟೆಂಡರ್ ಕರೆಯುವುದು.

. . .4/-

Scanned with CamScanner

2. ಮೇಲಿನ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ. ಕಾಯ್ದೆ / ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಿರುವುದನ್ನು ಬಿಬಿಎಂಪಿ ಮುಖ್ಯ ಆಯುಕ್ತರು ಖಚಿತಪಡಿಸಿಕೊಂಡು ಅನುಷ್ಠಾನಗೊಳಿಸುವುದು.
3. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 304 ಸಿಎಸ್‌ಎಸ್ 2020, ದಿನಾಂಕ: 28-04-2021ರಲ್ಲಿ ಮೀಸಲಿಟ್ಟಿರುವ ಅನುದಾನದಲ್ಲಿ ಭರಿಸುವುದು.
4. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು ಹಾಗೂ ಹೆಚ್ಚುವರಿ ಟೆಂಡರ್ ಪ್ರೀಮಿಯಂ ಅನ್ನು ಬಿಬಿಎಂಪಿಯ ಸ್ವಂತ ಸಂಪನ್ಮೂಲದಿಂದ ಭರಿಸತಕ್ಕದ್ದು.
5. ಕರ್ನಾಟಕ ಆರ್ಥಿಕ ಸಂಹಿತೆ 1958 ಸಾಧಿಲ್ವಾರು ವೆಚ್ಚ ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳನುಸಾರ ಕ್ರಮವಹಿಸತಕ್ಕದ್ದು.
6. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಪುನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು. ಅನುಮೋದನೆಗೊಂಡಿರುವ ಕಾಮಗಾರಿಯನ್ನಲ್ಲದೆ ಯಾವುದೇ ಕಾರಣಕ್ಕೆ ಬೇರೆ ಕಾಮಗಾರಿಗಳನ್ನು ಕೈಗೊಳ್ಳಬಾರದು.
7. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.
8. ದಿನಾಂಕ: 01-12-2022ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.
9. ಸದರಿ ಬಿಡ್ದುದಾರರು ಅಥವಾ ಇನ್ಯಾವುದೇ ಹಂತದಲ್ಲಿ ತಪ್ಪು ಮಾಹಿತಿ / ದಾಖಲೆ ನೀಡಿರುವುದು ಕಂಡುಬಂದಲ್ಲಿ ಟೆಂಡರ್‌ಅನ್ನು ರದ್ದುಪಡಿಸಲು ಬಿಬಿಎಂಪಿ ಮುಖ್ಯ ಆಯುಕ್ತರು ನಿಯಮಾನುಸಾರ ಕ್ರಮ ವಹಿಸುವುದು.
10. ರೂ.10.00 ಕೋಟಿಗಿಂತ ಕಡಿಮೆ ಪ್ಯಾಕೇಜ್‌ಗಳಲ್ಲಿನ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಸೂಕ್ತ ಸಮರ್ಥನೆ ಮತ್ತು ಸ್ಪಷ್ಟೀಕರಣಗಳನ್ನು ಪಡೆಯತಕ್ಕದ್ದು. ಇನ್ನು ಮುಂದೆ ಸೂಕ್ತ ಸಮರ್ಥನೆ ಇಲ್ಲದೆ ರೂ.10.00 ಕೋಟಿಗಿಂತ ಕಡಿಮೆ ಪ್ಯಾಕೇಜ್‌ಗಳಲ್ಲಿ ಕಾಮಗಾರಿಗಳನ್ನು ಪ್ರಸ್ತಾಪಿಸದಂತೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀಸಾಗರ್ ಎನ್.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

21/01

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.

. . .5/-

Scanned with CamScanner

3. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with CamScanner